# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 155

ಉತ್ತರಿಸಬೇಕಾದ ದಿನಾಂಕ : 10.07.2018

ಉತ್ತರಿಸುವ ಸಚಿವರು : ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು, ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೊಡಗು ಜಿಲ್ಲೆಯಲ್ಲಿನ ಮಡಿಕೇರಿ ನಗರಸಭೆ ಹಾಗೂ ಇತರೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಈಗಾಗಲೇ ತೆರಿಗೆ ಪಾವತಿಸಿ ಖಾತೆ ಹೊಂದಿರುವವರು ತಮ್ಮ ಜಾಗದಲ್ಲಿರುವ ಹಳೆ ಮನೆ ಕೆಡವಿ ಹೊಸದಾಗಿ ನಿರ್ಮಿಸಲು ಅಥವಾ ದುರಸ್ಥಿಗೊಳಿಸಲು ಸದರಿ ನಿವೇಶನವನ್ನು ಭೂ ಪರಿವರ್ತನೆ ಮಾಡಬೇಕೆಂದು ಆದೇಶ ಹೊರಡಿಸಿರುವುದರಿಂದ ಖಾತೆದಾರರಿಗೆ ತೀವ್ರ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ಭೂ ಕಂದಾಯ ಕಾಯ್ದೆಯನ್ವಯ ಯಾವುದೇ ಜಮೀನನ್ನು ವ್ಯವಸಾಯೇತರ ಉದ್ದೇಶಕ್ಕೆ ಉಪಯೋಗಿಸಲು ಕಂದಾಯ ಇಲಾಖೆಯಿಂದ ಭೂ ಪರಿವರ್ತನಾ ಆದೇಶ ಪಡೆಯುವುದು ಕಡ್ಡಾಯವಾಗಿರುತ್ತದೆ. ಮುಂದುವರೆದು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ವಯ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಅಭಿವೃದ್ಧಿಗಳಿಗೆ ಅನುಮೋದನೆಯನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆಯಬೇಕಾಗಿರುತ್ತದೆ.<br><br>ಕರ್ನಾಟಕ ಪೌರಕಾಯ್ದೆ, 1964ರ ಕಲಂ 387ನ್ನು ದಿನಾಂಕ 08.12.1976ರಲ್ಲಿ ಜಾರಿಗೆ ಬಂದಿದ್ದು, ಈ ಕೆಳಕಂಡಂತೆ ಇರುತ್ತದೆ;<br>387. ಯೋಜನಾ ಪ್ರಾಧಿಕಾರದೊಂದಿಗೆ ಸಮಾಲೋಚನೆ:- ಮುನ್ಸಿಪಲ್ ಕೌನ್ಸಿಲು, ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಮೇರೆಗೆ ಯೋಜನಾ ಪ್ರಾಧಿಕಾರವನ್ನು ರಚಿಸದೆ ಇರುವ ಸ್ಥಳಗಳಲ್ಲಿ, ಪಟ್ಟಣ ಯೋಜನೆಗೆ ಸಂಬಂಧಿಸಿದ ವಿಷಯಗಳಲ್ಲಿ ಅತಿ ಸಮೀಪದ ಯೋಜನಾ ಪ್ರಾಧಿಕಾರದೊಡನೆ ಸಮಾಲೋಚಿಸತಕ್ಕದ್ದು.<br><br>ವಿನ್ಯಾಸ ಅನುಮೋದನೆಗೆ ಕಂದಾಯ ಇಲಾಖೆಯ ಭೂ ಪರಿವರ್ತನಾ ಆದೇಶವನ್ನು ಪಡೆಯಬೇಕಿದ್ದು, ಕಟ್ಟಡ ನಕ್ಷೆ ಅನುಮೋದನೆಗೆ ಪೂರ್ವದಲ್ಲಿ ವಿನ್ಯಾಸ ಅನುಮೋದನೆ ಪಡೆಯಬೇಕಿರುತ್ತದೆ.<br><br>ಆದ್ದರಿಂದ, ರಾಜ್ಯದ ಯಾವುದೇ ನಗರ / ಪಟ್ಟಣ ಪ್ರದೇಶಗಳಲ್ಲಿ ಕಟ್ಟಡ ಪರವಾನಿಗೆ ನೀಡುವ ಪೂರ್ವದಲ್ಲಿ **(ದಿನಾಂಕ 08.12.1976ರ ತಿದ್ದುಪಡಿಯ ನಂತರ)** ಭೂ ಪರಿವರ್ತನಾ ಆದೇಶ ಹಾಗೂ ವಿನ್ಯಾಸ ಅನುಮೋದನೆಯನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ಇವರಿಂದ ದಿನಾಂಕ: 04.05.2017ರ ಸುತ್ತೋಲೆಯನ್ನು ಹೊರಡಿಸಲಾಗಿರುತ್ತದೆ. |

| | | |
|---|---|---|
| | | ಸದರಿ ಸುತ್ತೋಲೆಯನ್ನು ಪರಿಷ್ಕರಿಸುವ ಕುರಿತು ಕಾನೂನು ಇಲಾಖೆಯಿಂದ ಅಭಿಪ್ರಾಯ ಪಡೆಯಲಾಗಿದ್ದು, ಅಕ್ರಮ-ಸಕ್ರಮ ಯೋಜನೆಗೆ ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ತಡೆಯಾಜ್ಞೆ ಇರುವುದರಿಂದ ಈ ಹಂತದಲ್ಲಿ ಕ್ರಮ ಜರುಗಿಸಲು ಅವಕಾಶವಿಲ್ಲವೆಂದು ಕಾನೂನು ಇಲಾಖೆಯು ಅಭಿಪ್ರಾಯಿಸಿದೆ. ಆದರೆ, ಸುತ್ತೋಲೆಯಲ್ಲಿನ ನಿರ್ದೇಶನಗಳನ್ನು ಪಾಲಿಸುವಲ್ಲಿ ಸಮಸ್ಯೆಗಳನ್ನು ವಿವರಿಸಿ ಕೆಲವು ಪ್ರಾಧಿಕಾರಗಳು ಸ್ಪಷ್ಟೀಕರಣ, ಮಾರ್ಗದರ್ಶನವನ್ನು ನೀಡುವಂತೆ ಕೋರುತ್ತಿದ್ದು ಹಾಗೂ ಜನ ಪ್ರತಿನಿಧಿಗಳು ಮತ್ತು ಸಾರ್ವಜನಿಕರಿಂದ ಮನವಿಗಳು ಸ್ವೀಕೃತವಾಗಿರುವ ಹಿನ್ನೆಲೆಯಲ್ಲಿ, ಸದರಿ ವಿಷಯದ ಕುರಿತು ಅಡ್ವೋಕೇಟ್ ಜನರಲ್ ಇವರ ಅಭಿಪ್ರಾಯ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ. |
| ಆ | ಬಂದಿದ್ದಲ್ಲಿ, ಸದರಿ ಆದೇಶವನ್ನು ಹಿಂಪಡೆದು ಹೊಸ ಆದೇಶವನ್ನು ಹೊರಡಿಸಲಾಗುವುದೇ? | ಅಡ್ವೋಕೇಟ್ ಜನರಲ್ ರವರ ಅಭಿಪ್ರಾಯ ಪಡೆದ ನಂತರ ನಿಯಮಾನುಸಾರ ಕ್ರಮವಹಿಸಲಾಗುವುದು. |

ನಅಇ 236 ಮೈಅಪ್ರಾ 2018

(ರಮೇಶ್ ಲ. ಜಾರಕಿಹೊಳಿ)
ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು, ಹಾಗೂ
ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು